ರಾಜ್ಯದಲ್ಲಿ ಹೊಸದಾಗಿ ಪದವಿ ಕಾಲೇಜುಗಳ ಮಂಜೂರಾತಿ

82 (135) ಶ್ರೀ ಗೂಳಿಹಟ್ಟಿ ಡಿ. ಶೇಖರ (ಹೊಸದುರ್ಗ) : ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಹೊಸದಾಗಿ ಪದವಿ ಕಾಲೇಜುಗಳನ್ನು ಮಂಜೂರು ಮಾಡುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ;

ಆ) ರಾಜ್ಯದಲ್ಲಿ ಅತಿಕಡಿಮೆ 50 ವಿದ್ಯಾರ್ಥಿಗಳ ಸಂಖ್ಯೆಯಲ್ಲಿರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟಿದೆ;

ಇ) ರಾಜ್ಯದಲ್ಲಿ ಅತಿಹೆಚ್ಚು ವಿದ್ಯಾರ್ಥಿಗಳ ಸಂಖ್ಯೆಯಲ್ಲಿರುವ ಪದವಿ (ಅವಶ್ಯವಿರುವ) ಕಾಲೇಜುಗಳ ಸಂಖ್ಯೆ ಎಷ್ಟು;

ಈ) ಮಹಿಳಾ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಮಹಿಳಾ ಪದವಿ ಕಾಲೇಜು ಆರಂಭಿಸಲು ಸರ್ಕಾರವು ಚಿಂತನೆ ನಡೆಸಿದಯೇ?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು):–

ಅ) ಇಲ್ಲ

ಆ) 03

ಇ) 14

ಈ) 23 ಚಿಂತನೆ ನಡೆಸಿಲ್ಲ

ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳಿಗೆ ಭೋಧಕೇತರ ಹುದ್ದೆಗಳ ಭರ್ತಿ

84 (307) ಶ್ರೀ ಹಾಲಪ್ಪ ಹೆಚ್ (ಸೊರಬ) : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಪ್ರಥಮ ದರ್ಜೆ, ದ್ವಿತೀಯ ದರ್ಜೆ, ಸಹಾಯಕರು ಹಾಗೂ 'ಡಿ' ಗುಂಪಿನ ನೌಕರರ ಸಂಖ್ಯೆ ಎಷ್ಟು (ಕಾಲೇಜುವಾರು, ಪ್ರೌಢ ಶಾಲಾವಾರು ಮತ್ತು ಹುದ್ದೆವಾರು ಪ್ರತ್ಯೇಕ ಮಾಹಿತಿ ನೀಡುವುದು)

ಆ) ಶಾಲಾ ಆಡಳಿತ ವರ್ಗಕ್ಕೆ ಮತ್ತು ವಿದ್ಯಾರ್ಥಿಗಳಿಗೆ ಇದರಿಂದ ತುಂಬಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಖಾಲಿ ಇರುವ ಎಫ್.ಡಿಎ., ಎಸ್‌ಡಿಎ ಮತ್ತು 'ಡಿ' ಗುಂಪಿನ ನೌಕರರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು

ಈ) ಯಾವಾಗ ಭರ್ತಿ ಮಾಡಲಾಗುವುದು (ವಿವರ ನೀಡುವುದು)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಖಾಲಿ ಇರುವ ಹುದ್ದೆಗಳ ವಿವರ

ಕ್ರ.ಸಂ.	ಪ್ರದಸ	ದ್ವಿದಸ	ಪರಿಚಾರಕರು 'ಡಿ' ದರ್ಜೆ ನೌಕರರು		ಒಟ್ಟು
1	77	257	55	509	898

ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ

ಹುದ್ದೆವಾರು	ಬೆಂಗಳೂರು ಆಯುಕ್ತಾಲಯ	ಧಾರವಾಡ ಆಯುಕ್ತಾಲಯ	ಗುಲ್ಬರ್ಗಾ ಆಯುಕ್ತಾಲಯ	ಒಟ್ಟು
ಪ್ರದಸ	87	22	56	165
ದ್ವಿದಸ	00	11	112	123
ಡಿ ಗುಂಪು	1225	253	327	1805

ಆ) ಹೌದು

ಇ) **ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ** ಖಾಲಿ ಇರುವ ಭೋಧಕೇತರ ಹುದ್ದೆಗಳನ್ನು ವೃತ್ತಿ ಶಿಕ್ಷಣ ಇಲಾಖೆಯಿಂದ ಸೇವಾ ವಿಲೀನವಾಗುವ ಅರೆಕಾಲಿಕ ಸಿಬ್ಬಂದಿಯಿಂದ ಹಾಗೂ ಬಡ್ತಿ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಪ್ರದಸ ಹಾಗೂ ದ್ವಿದಸ ಹುದ್ದೆಗಳನ್ನು ಅನುಕ್ರಮವಾಗಿ ಪದೋನ್ನತಿ ಹಾಗೂ ಅನುಕಂಪದ ಆಧಾರದ ಮೇರೆಗೆ ನೇಮಕಾತಿಗೆ ಕ್ರಮವಹಿಸಲಾಗಿದೆ. ಕೆಲವು 'ಡಿ' ದರ್ಜೆ ನೌಕರರ ಖಾಲಿ ಹುದ್ದೆಗಳನ್ನು ಸಹ ಅನುಕಂಪದ ಮೇರೆಗೆ ನೇಮಕ ಮಾಡಲಾಗಿದೆ.

ಈ) ವೃತ್ತಿ ಶಿಕ್ಷಣ ಇಲಾಖೆಯಲ್ಲಿ ತಾತ್ಕಾಲಿಕವಾಗಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸೇವಾ ಸಕ್ರಮಾತಿಗೆ ರಚಿಸಿದ್ದ ಸಮಿತಿಯು ವರದಿಯನ್ನು ಸಲ್ಲಿಸಿದೆ. ಸದರಿ ವರದಿಯನ್ನು ಪರಿಶೀಲಿಸಿ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಆರ್ಥಿಕ ಇಲಾಖೆಯ ಅನುಮತಿ ಪಡೆದು ನೇರ ನೇಮಕಾತಿಗೆ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುವುದು.

ಸರ್ಕಾರಿ ಪ್ರಾಥಮಿಕ–ಪ್ರೌಢ ಶಾಲೆಗಳಲ್ಲಿ ಮೂಲಭೂತ ವ್ಯವಸ್ಥೆ

89 (373) ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರ ಹಮ್ಮಿಕೊಂಡ ಕ್ರಮಗಳೇನು

ಆ) ಈ ಕುರಿತು ಕೇಂದ್ರ ಸರ್ಕಾರದಿಂದ ಇದುವರೆಗೆ ಮಂಜೂರಾದ ಹಣದ ಮೊತ್ತ ಮತ್ತು ಖರ್ಚು ಮಾಡಿದ ಮೊತ್ತದ ವಿವರಗಳೇನು;

ಇ) ರಾಜ್ಯದ ಸಾಕ್ಷರತಾ ಪ್ರಮಾಣವನ್ನು ಹೆಚ್ಚಿಸಲು ಇಲಾಖೆಯ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯಿದೆಯ ಅನುಷ್ಠಾನಕ್ಕಾಗಿ ಕರ್ನಾಟಕ ರಾಜ್ಯ ಕರಡು ನೀತಿಯನ್ನು ರೂಪಿಸಲಾಗಿದೆ. ಅಧಿಸೂಚನೆಗಾಗಿ ಸರ್ಕಾರದ ಹಂತದಲ್ಲಿದ್ದು, ಪರಿಶೀಲನೆಯಲ್ಲಿದೆ.

ಶಿಕ್ಷಣ ಹಕ್ಕು ಕಾಯಿದೆಯ ಬಗ್ಗೆ ಸಮುದಾಯದಲ್ಲಿ ಜಾಗೃತಿ ಮೂಡಿಸಲು ದಿನಾಂಕ 5.7.2011 ಹಾಗೂ ದಿನಾಂಕ 11.11.2011 ರಂದು ಎಲ್ಲಾ ಶಾಲೆಗಳಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಹಬ್ಬದ ರೀತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ರಾಜ್ಯ ತಯಾರಿಸಿರುವ ಕರಡು ನೀತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಇದರ ಬಗ್ಗೆ ವಾರ್ತಾ ಪತ್ರಿಕೆಯಲ್ಲಿ ಜಾಹಿರಾತು ನೀಡಿ, ಸಾರ್ವಜನಿಕರಿಂದ, ಶಿಕ್ಷಣ ತಜ್ಞರಿಂದ, ಶಾಲೆಗಳಿಂದ, ಶಿಕ್ಷಕರಿಂದ ಅಭಿಪ್ರಾಯಗಳನ್ನು ಸಂಗ್ರಹಿಸಿ, ಕ್ರೋಢೀಕರಿಸಿ ಅದರಂತೆ ಕರಡು ನೀತಿಯನ್ನು ಪರಿಷ್ಕರಿಸಲಾಗಿದೆ.

ಇದರ ಬಗ್ಗೆ ಚರ್ಚಿಸಲು ವಿಭಾಗಮಟ್ಟದ, ಜಿಲ್ಲಾಮಟ್ಟದ ಕಾರ್ಯಾಗಾರಗಳನ್ನು ನಡೆಸಲಾಗಿದೆ.

ಆರ್.ಟಿ.ಇ. ಕಾಯಿದೆಯಲ್ಲಿನ ಕೆಳಕಂಡ ಅಂಶಗಳ ಬಗ್ಗೆ ಈಗಾಗಲೇ ಸರ್ಕಾರಿ ಆದೇಶವನ್ನು ಹೊರಡಿಸಲಾಗಿದೆ.